All India Radio: Bangalore
Regional Bulletin In Kannada
22.09.2026 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕಸ್ತೂರಿ ರಂಗನ್ ವರದಿ - ಕೇಂದ್ರದ ಅಧಿಸೂಚನೆ ವಿರೋಧಿಸಿ ವಿಧಾನಸಭೆಯಲ್ಲಿ ಸರ್ವಾನುಮತದ ನಿರ್ಣಯ ಅಂಗೀಕಾರ
- ಕರ್ನಾಟಕ ಲೋಕ ಸೇವಾ ಆಯೋಗ ಮುಚ್ಚಲು ಚಿಂತನೆ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಹಿರಿಯ ನಟ ಅನಂತ್ ನಾಗ್ ಅವರಿಗೆ ದಾದಾ ಸಾಹೇಬ್ ಪಾಲ್ಕೆ ಪ್ರಶಸ್ತಿ ನೀಡಿ ಗೌರವಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು
- ರಾಜ್ಯದಲ್ಲಿ ವಿತ್ತಿಯ ಕೊರತೆ ಹೆಚ್ಚುತ್ತಿರುವ ಹಿನ್ನೆಲೆ ; ಹೊಸ ಯೋಜನೆ ಘೋಷಣೆ ಮಾಡದಂತೆ ಹಣಕಾಸು ಇಲಾಖೆ ಸರ್ಕಾರಕ್ಕೆ ಸಲಹೆ
- ಬೆಂಗಳೂರಿನಲ್ಲಿ ೨೪ ಲಕ್ಷಕ್ಕೂ ಹೆಚ್ಚು ಆಸ್ತಿ ದಾಖಲೆಗಳ ಗಣಕೀಕರಣ - ಸಚಿವ ಕೃಷ್ಣಬೈರೇಗೌಡ

<><><><>

ವಿಧಾನಸಭೆ ಅಧಿವೇಶನದಲ್ಲಿ ಕಸ್ತೂರಿ ರಂಗನ್ ವರದಿ ಕರಡು ಅಧಿಸೂಚನೆ ವಿರುದ್ಧ ನಿರ್ಣಯವನ್ನು ಸರ್ವಾನುಮತದಿಂದ ಅಂಗೀಕರಿಸಲಾಗಿದೆ. ಕೇಂದ್ರ ಸರ್ಕಾರದ ೬ನೇ ಕರಡು ಅಧಿಸೂಚನೆಯನ್ನು ಯಥಾವತ್ತಾಗಿ ಒಪ್ಪಲು ಸಾಧ್ಯವಿಲ್ಲ. ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಉನ್ನತಮಟ್ಟದ ಸಮಿತಿ ರಚಿಸಲಿದೆ ಎಂದು ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಘೋಷಿಸಿದ್ದಾರೆ. ಭೌತಿಕ ಸರ್ವೇಗೆ ಒಂದು ವರ್ಷ ಕಾಲಾವಕಾಶ ಕೋರಿದ್ದಾರೆ. ಕೇಂದ್ರ ಸರ್ಕಾರ ಅಧಿಸೂಚನೆಯನ್ನು ಮರುಪರಿಶೀಲಿಸಬೇಕು ಎಂದು ನಿರ್ಣಯ ಮಂಡಿಸಿದ್ದಾರೆ. ಇಎಸ್ಎ ವ್ಯಾಪ್ತಿಯಲ್ಲಿ ಕೇವಲ ಅಧಿಸೂಚಿತ ಅರಣ್ಯ ಪ್ರದೇಶ, ಇತರೆ ಅರಣ್ಯ ಪ್ರದೇಶ ಮಾತ್ರ ಸೇರಿಸಬೇಕು. ಕೃಷಿ ಭೂಮಿ, ತೋಟ, ಜನವಸತಿ ಭೂಮಿ ಸೇರಿಸಬಾರದು ಎಂದು ನಿರ್ಣಯ ಕೈಗೊಳ್ಳಲಾಗಿದೆ.

ರಾಜ್ಯ ಸರ್ಕಾರದ ನಿರ್ಣಯಕ್ಕೆ ಪ್ರತಿಪಕ್ಷಗಳಿಂದಲೂ ಬೆಂಬಲ ವ್ಯಕ್ತವಾಗಿದೆ. ರಾಜ್ಯಮಟ್ಟದ ಸಮಿತಿಗೆ ಸಹಾಯ ಮಾಡಲು ಗ್ರಾಮ ಪಂಚಾಯತಿ ಮಟ್ಟದಲ್ಲಿಯೂ ಜನಪ್ರತಿನಿಧಿಗಳನ್ನೊಳಗೊಂಡ ಸಮಿತಿ ರಚಿಸಲು ನಿರ್ಧರಿಸಲಾಗಿದೆ. ಮುಖ್ಯಮಂತ್ರಿ ನೇತೃತ್ವದಲ್ಲಿ ಸರ್ವಪಕ್ಷ ನಿಯೋಗ ಪ್ರಧಾನಿ ಹಾಗೂ ಕೇಂದ್ರ ಅರಣ್ಯ ಸಚಿವರನ್ನು ಭೇಟಿ ಮಾಡಲು ಸದನ ನಿರ್ಣಯ ಕೈಗೊಂಡಿದೆ.

<><><><>

ವಿಧಾನ ಪರಿಷತ್ ಕಲಾಪದ ಎರಡನೇ ದಿನವಾದ ಇಂದು ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಕಸ್ತೂರಿ ರಂಗನ್ ವರದಿಯ ಕುರಿತಂತೆ ಅಧಿಕೃತ ನಿರ್ಣಯ ಮಂಡಿಸಿದರು. ಪಶ್ಚಿಮ ಘಟ್ಟಗಳನ್ನು ಉಳಿಸಬೇಕು. ಅರಣ್ಯ, ನದಿಗಳು, ಜಲಮೂಲಗಳು ಮತ್ತು ಜೀವವೈವಿಧ್ಯವನ್ನು ರಕ್ಷಿಸಬೇಕು. ಅದೇ ಸಮಯದಲ್ಲಿ, ರೈತರು, ತೋಟಗಾರರು, ಆದಿವಾಸಿಗಳು ಮತ್ತು ಸ್ಥಳೀಯ ನಿವಾಸಿಗಳ ಹಕ್ಕು - ಹಿತಾಸಕ್ತಿಗಳನ್ನು ಕಾಪಾಡಬೇಕು ಎಂದು ಸದನದಲ್ಲಿ ತಿಳಿಸಿದರು. ವರದಿಯಿಂದ ಕೃಷಿ ಮತ್ತು ತೋಟಗಾರಿಕೆಗೆ ಅನಗತ್ಯ ಅಡ್ಡಿಯಾಗಬಾರದು. ಯಾವುದೇ ಕಾರಣಕ್ಕೂ ಕಾಡಂಚಿನ ಗ್ರಾಮಗಳಲ್ಲಿರುವ ಜನರನ್ನು ಸ್ಥಳಾಂತರಿಸುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು. ಅಕ್ರಮ ಗಣಿಗಾರಿಕೆ, ಅಕ್ರಮ ಮರಳು ಗಣಿಗಾರಿಕೆ, ಮಿತಿಮೀರಿದ ಗುಡ್ಡಕಡಿತ, ಒತ್ತುವರಿ ಮತ್ತು ಅಸುರಕ್ಷಿತ ಹಾಗೂ ಹೆಚ್ಚಿನ ಮಾಲಿನ್ಯ ಉಂಟುಮಾಡುವ ವಾಣಿಜ್ಯ ಚಟುವಟಿಕೆಗಳಿಗೆ ಯಾವುದೇ ರಕ್ಷಣೆ ನೀಡಲಾಗುವುದಿಲ್ಲ. ಇಂತಹ ಚಟುವಟಿಕೆಗಳ ವಿರುದ್ಧ ಕಾನೂನುಬದ್ಧವಾಗಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸದನದಲ್ಲಿ ಕಠಿಣ ಸಂದೇಶ ರವಾನಿಸಿದ್ದಾರೆ. ಈ ವೇಳೆ ಬಿಜೆಪಿ ಸದಸ್ಯರಾದ ಸಿ.ಟಿ.ರವಿ ಹಾಗೂ ರವಿಕುಮಾರ್ ಸರ್ಕಾರಕ್ಕೆ ಕಸ್ತೂರಿ ರಂಗನ್ ವರದಿ ವಿಚಾರವಾಗಿ ಕೆಲವು ಸಲಹೆ ಸೂಚನೆಗಳನ್ನು ನೀಡಿದರು.

<><><><>

ಕೆಪಿಎಸ್‌ಸಿಯಲ್ಲಿ ಹಗರಣಗಳು ಹೆಚ್ಚಿದ್ದು, ಕಾನೂನು ಚೌಕಟ್ಟಿನಲ್ಲಿ ಮುಚ್ಚುವ ಬಗ್ಗೆ ತಜ್ಞರ ಜೊತೆ ಚರ್ಚೆ ನಡೆಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಪಿಎಸ್‌ಸಿಯಲ್ಲಿ ಖದೀಮರು ಸೇರಿಕೊಂಡಿದ್ದು, ನಂಬಿಕೆಯಿಟ್ಟು ಆಯ್ಕೆ ಮಾಡಿದ ಅಧಿಕಾರಿಗಳು ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ ಎಂದು ಅಸಮಧಾನ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ ಸೌಜನ್ಯ ಪ್ರಕರಣದ ಮರು ತನಿಖೆ

ಕುರಿತಂತೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ತನಿಖೆಗೆ ಯಾರೂ ಹಸ್ತಕ್ಷೇಪ ಮಾಡುವುದಿಲ್ಲ. ಕಾನೂನು ಪ್ರಕಾರ ಎಲ್ಲವೂ ನಡೆಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಹಿರಿಯ ನಟ ಅನಂತನಾಗ್ ಅವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ೨೦೨೪ನೇ ಸಾಲಿನ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ ಪ್ರದಾನ ಮಾಡಿದರು.  ಗುಜರಾತ್‌ನ ಕೆವಾಡಿಯಾದಲ್ಲಿ ನಡೆದ ೭೨ನೇ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅನಂತ್‌ನಾಗ್ ಅವರು ಪ್ರಶಸ್ತಿ ಸ್ವೀಕರಿಸಿದರು. ಬಳಿಕ ಮಾತನಾಡಿದ ಅವರು, ಕರ್ನಾಟಕ ನನ್ನ ಕರ್ಮ ಭೂಮಿಯಾಗಿದೆ ಎಂದು ತಿಳಿಸಿದರು. ಇದೇ ವೇಳೆ ಕನಕದಾಸರ ಕೀರ್ತನೆ ಉಲ್ಲೇಖಿಸಿದ ಅವರು, ಎಲ್ಲರೂ ಮಾಡುವುದು ಹೊಟ್ಟೆಗಾಗಿ ಗೇಣು ಬಟ್ಟೆಗಾಗಿ ಎಂದು ತಮ್ಮ ನಟನಾ ಕ್ಷೇತ್ರದ ಒಲವಿನ ಬಗ್ಗೆ ಪ್ರಸ್ತಾಪಿಸಿದರು. ಈ ಪ್ರಶಸ್ತಿಯ ಹಿಂದೆ ಹಲವರ ಶ್ರಮವಿದ್ದು, ತಮ್ಮೊಂದಿಗೆ ಅಭಿನಯಿಸಿದ್ದ ನಟರು, ನಿರ್ದೇಶಕರು ಹಾಗೂ ಕಾರ್ಮಿಕರಿಗೆ ಧನ್ಯವಾದ ಸಲ್ಲಿಸಿದ್ದಾರೆ. ಅನಂತ್ ನಾಗ್ ಈ ಹಿಂದೆ ಪದ್ಮಭೂಷಣ ಪ್ರಶಸ್ತಿಗೂ ಭಾಜನರಾಗಿದ್ದರು. ಸುಮಾರು ೩೦೦ಕ್ಕೂ ಹೆಚ್ಚು ಸಿನಿಮಾಗಳಲ್ಲಿ ವಿಭಿನ್ನ ಪಾತ್ರಗಳ ಮೂಲಕ ವಿವಿಧ ಭಾಷೆಗಳಲ್ಲಿ ನಟಿಸಿದ್ದಾರೆ. ಇದೇ ಸಮಾರಂಭದಲ್ಲಿ ಕನ್ನಡದ ಮಿಥ್ಯ ಚಿತ್ರ ಅತ್ಯುತ್ತಮ ಚಲನಚಿತ್ರ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದೆ. ಈ ಚಿತ್ರದ ನಟನೆಗಾಗಿ ರೂಪಶ್ರೀ ವರ್ಕಾಡಿ ಅತ್ಯುತ್ತಮ ಪೋಷಕ ನಟಿ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಮಿಥ್ಯ ಸಿನಿಮಾದಲ್ಲಿನ ನಟನೆಗಾಗಿ ಅತ್ಯುತ್ತಮ ಬಾಲನಟ ಪ್ರಶಸ್ತಿಯನ್ನು ಅತೀಶ್ ಎಸ್. ಶೆಟ್ಟಿ ಪಡೆದುಕೊಂಡಿದ್ದಾರೆ. ಶಿವಧ್ವಜ್ ಶೆಟ್ಟಿ ನಿರ್ದೇಶನದ ಇಂಬು ಅತ್ಯುತ್ತಮ ತುಳು ಚಿತ್ರ ಪ್ರಶಸ್ತಿ ಪಡೆದುಕೊಂಡಿದೆ.

<><><>

ರಾಜ್ಯದಲ್ಲಿ ವಿತ್ತೀಯ ಕೊರತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಹೊಸ ಯೋಜನೆಗಳ ಘೋಷಣೆ ಮಾಡದಂತೆ ಹಣಕಾಸು ಇಲಾಖೆ ಎಚ್ಚರಿಕೆ ನೀಡಿದೆ. ಪಿಡಬ್ಲ್ಯೂಡಿ, ಜಲಸಂಪನ್ಮೂಲ, ಸಣ್ಣ ನೀರಾವರಿ ಹಾಗೂ ಆರ್ ಡಿಪಿಆರ್ ಇಲಾಖೆಗಳಲ್ಲಿ ಒಟ್ಟು ೩೮ ಸಾವಿರದ ೧೩೮ ಕೋಟಿ ಬಿಲ್ ಬಾಕಿಯಿದೆ. ಹೀಗಾಗಿ ಹೊಸ ಕಾಮಗಾರಿಗಳಿಗಿಂತ ಮೊದಲು ಹಣಕಾಸಿನ ಲಭ್ಯತೆ ಖಚಿತಪಡಿಸಿಕೊಳ್ಳಲು ಹಣಕಾಸು ಇಲಾಖೆ ಸಲಹೆ ನೀಡಿದೆ. ಈ ಬಗ್ಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ ನೀಡಿದ್ದು, ಸರ್ಕಾರದ ಹಿತಕ್ಕಾಗಿ ಹಣಕಾಸು ಇಲಾಖೆ ಸಲಹೆ ನೀಡಿದೆ. ಹಣಕಾಸು ಸಚಿವರಾಗಿ ಯಾವ ಯೋಜನೆ ನಿಲ್ಲಿಸಬೇಕು, ಯಾವ ಯೋಜನೆ ಸೇರಿಸಬೇಕು

ಎನ್ನುವುದು ತಿಳಿದಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಅವರು ಸಮರ್ಥಿಸಿಕೊಂಡಿದ್ದಾರೆ.

<><><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಇ-ಆಸ್ತಿ ೨.೦ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗಿದ್ದು, ಸಚಿವ ಕೃಷ್ಣಬೈರೇಗೌಡ ಇಂದು ಲೋಕಾರ್ಪಣೆಗೊಳಿಸಿದರು. ಈ ವೇಳೆ ಮಾತನಾಡಿದ ಅವರು, ೨೦೦೦ನೇ ಇಸವಿಯಲ್ಲಿ ಭೂಮಿ ದಾಖಲೆಗಳ ಗಣಕೀಕರಣದ ಮೂಲಕ ಆಸ್ತಿ ದಾಖಲೆಗಳ ನಿರ್ವಹಣೆಯಲ್ಲಿ ದೇಶಕ್ಕೆ ಮಾದರಿಯಾಗುವಂತಹ ವ್ಯವಸ್ಥೆಯನ್ನು ರಾಜ್ಯ ಪರಿಚಯಿಸಿದೆ. ಇದರಿಂದ ಮಧ್ಯವರ್ತಿಗಳ ಹಸ್ತಕ್ಷೇಪ ಕಡಿಮೆಯಾಗಿದೆ ಎಂದು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ೩೫ ಲಕ್ಷಕ್ಕೂ ಹೆಚ್ಚು ಆಸ್ತಿಗಳ ಪೈಕಿ ೨೩ ರಿಂದ ೨೪ ಲಕ್ಷಕ್ಕೂ ಹೆಚ್ಚು ಆಸ್ತಿ ದಾಖಲೆಗಳ ಗಣಕೀಕರಣ ಮಾಡಲಾಗಿದೆ. ಇ-ಆಸ್ತಿ ೨.೦ ವ್ಯವಸ್ಥೆಯನ್ನು ಕಾವೇರಿ ವ್ಯವಸ್ಥೆಯೊಂದಿಗೆ ಸಂಯೋಜಿಸಲಾಗಿದ್ದು, ಬೆಂಗಳೂರು ಜಲಮಂಡಳಿ ಹಾಗೂ ಬೆಸ್ಕಾಂ ಸೇರಿದಂತೆ ಸಂಬಂಧಿತ ಇಲಾಖೆಗಳೊಂದಿಗೆ ಸಮನ್ವಯಗೊಳಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ 'ಸೇವಾ ಸಂಕಲ್ಪ ಅಭಿಯಾನ' ನಡೆಯುತ್ತಿದೆ. ಅದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ ಕುರಿತು ಒಂದು ನೋಟ ಇಲ್ಲಿದೆ. ಭಾರತೀಯ ಶಿಕ್ಷಣ ಕ್ಷೇತ್ರದಲ್ಲಿ ೧೯೬೮ ರಿಂದ ಚಾಲ್ತಿಯಲ್ಲಿದ್ದ '೧೦+೨' ಶಾಲಾ ಶಿಕ್ಷಣ ಮಾದರಿಗೆ ತೆರೆ ಎಳೆದಿರುವ 'ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦', ದೇಶದ ಶೈಕ್ಷಣಿಕ ವ್ಯವಸ್ಥೆಯನ್ನು ಸಂಪೂರ್ಣವಾಗಿ ಮರುರೂಪಿಸಿದೆ. ಈ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಸೂಕ್ತವಾಗಿ ಅಳವಡಿಸಿಕೊಂಡರೆ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿ ಸಾಧ್ಯ ಎಂದು ಬೆಂಗಳೂರಿನ ಶಿಕ್ಷಣ ತಜ್ಞ ಡಾ.ಬಿ.ಜಿ.ಭಾಸ್ಕರ ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿದ್ದಾರೆ.

ಧ್ವನಿ : ಡಾ.ಬಿ.ಜಿ.ಭಾಸ್ಕರ

<><><><>

ಬೆಂಗಳೂರಿನ ಲೋಕಭವನದಲ್ಲಿಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ತಮಿಳುನಾಡಿನ ಮಾಧ್ಯಮ ಪ್ರತಿನಿಧಿಗಳು ಭೇಟಿಯಾದರು. ಈ ಸಂದರ್ಭದಲ್ಲಿ ಬೆಂಗಳೂರಿನ ಕೇಂದ್ರ ವಾರ್ತಾ ಶಾಖೆಯ ಹೆಚ್ಚುವರಿ ಮಹಾ ನಿರ್ದೇಶಕ ಎಸ್.ಜಿ.ರವೀಂದ್ರ, ಹಾಗೂ ಚೆನ್ನೈನ ನಿರ್ದೇಶಕ ಪಿ.ಅರುಣ್‌ಕುಮಾರ್ ಉಪಸ್ಥಿತರಿದ್ದರು. ಈ ನಡುವೆ ತಮಿಳುನಾಡಿನ ಮದುರೈ ಜಿಲ್ಲೆಯ ಮಾಧ್ಯಮ ಪ್ರತಿನಿಧಿಗಳು ಬೆಂಗಳೂರಿನ ಕೇಂದ್ರ ವಾರ್ತಾ ಶಾಖೆ ಕಚೇರಿಗೆ ಭೇಟಿ ನೀಡಿದರು. ಎಸ್.ಜಿ.ರವೀಂದ್ರ ಅವರೊಂದಿಗೆ ಸಂವಾದ ನಡೆಸಿದ ಪತ್ರಕರ್ತರು ತಮಿಳುನಾಡಿನಲ್ಲಿ ಕೇಂದ್ರ ಸರ್ಕಾರದ ಜನಪರ ಯೋಜನೆಗಳ ಅನುಷ್ಠಾನ ಹಾಗೂ ಸ್ಥಿತಿಗತಿಗಳ ಕುರಿತು ಚರ್ಚೆ ನಡೆಸಿದರು. ಈ ವೇಳೆ ಮಾತನಾಡಿದ ಎಸ್.ಜಿ.ರವೀಂದ್ರ ಅವರು, ಕೇಂದ್ರ ಸರ್ಕಾರದ ಯೋಜನೆಗಳ ಸಮರ್ಪಕ ಅನುಷ್ಠಾನದಲ್ಲಿ ಮಾಧ್ಯಮಗಳ ಪಾತ್ರ ಬಹು ಮುಖ್ಯ ಎಂದು ತಿಳಿಸಿದರು.

<><><><>

ಆದಾಯಕ್ಕಿಂತ ಹೆಚ್ಚಿನ ಆಸ್ತಿ ಹೊಂದಿರುವ ಆರೋಪದ ಹಿನ್ನೆಲೆಯಲ್ಲಿ ರಾಜ್ಯದ ವಿವಿಧೆಡೆ ಸರ್ಕಾರಿ ಅಧಿಕಾರಿಗಳ ನಿವಾಸಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ಇಂದು ದಾಳಿ ನಡೆಸಿದ್ದಾರೆ. ಈ ವೇಳೆ ನಗದು, ಚಿನ್ನಾಭರಣ, ಆಸ್ತಿ ದಾಖಲೆಗಳು, ಮದ್ಯದ ಬಟಲಿಗಳು ಸೇರಿದಂತೆ ಬೆಲೆಬಾಳುವ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಮಂಡ್ಯ, ಕಲಬುರಗಿ ಮತ್ತು ಹುಬ್ಬಳ್ಳಿ-ಧಾರವಾಡದಲ್ಲಿ ದಾಳಿ ನಡೆದಿದ್ದು, ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>